ನಿ-330
ಸಿ-5
ಕಂಪ್ಯೂಟರ್

# ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330 ರಡಿಯಲ್ಲಿ ಗಮನ ಸೆಳೆಯುವ ಸೂಚನೆ

## ವಿಷಯ

ಕಾಲೇಜು ಶಿಕ್ಷಣ ಇಲಾಖೆ ಅಡಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದೀರ್ಘಕಾಲದಿಂದ ಸುಮಾರು 14,000 ಮಂದಿ ಅತಿಥಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇತ್ತೀಚೆಗೆ ಇವರ ಬೋಧನಾ ಅವಧಿಯನ್ನು ಹೆಚ್ಚು ಮಾಡಿ, ವೇತನ ಪರಿಷ್ಕರಣೆ ಮಾಡಿರುವುದರಿಂದ ಸುಮಾರು 6,000 ಮಂದಿ ಅತಿಥಿ ಉಪನ್ಯಾಸಕರು ಉದ್ಯೋಗ ಕಳೆದುಕೊಳ್ಳುವ ಸಂಭವವಿದ್ದು ಮತ್ತು ನೇಮಕಗೊಂಡಿರುವ ಅತಿಥಿ ಉಪನ್ಯಾಸಕರನ್ನು ಹತ್ತು ತಿಂಗಳಿಗೂ ಮುನ್ನ ಕರ್ತವ್ಯದಿಂದ ಬಿಡುಗಡೆಗೊಳಿಸುತ್ತಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಉನ್ನತ ಶಿಕ್ಷಣ, ಐ.ಟಿ ಅಂಡ್ ಬಿ.ಟಿ. ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ ಸಚಿವರ ಪ್ರಸ್ತಾಪಿಸಬಯಸುತ್ತೇನೆ.

## ಉತ್ತರ

ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ: 18.12.2003 ರಲ್ಲಿ ಖಾಯಂ ಉಪನ್ಯಾಸಕರಿಗೆ ನಿಗಧಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು, ಅರೆಕಾಲಿಕ ಉಪನ್ಯಾಸಕರ ಬದಲಿಗೆ, ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು. ಖಾಯಂ ಉಪನ್ಯಾಸಕರಿಗೆ ವಾರಕ್ಕೆ ವಿಜ್ಞಾನ ವಿಭಾಗದಲ್ಲಿ 20 ಗಂಟೆಗಳು ಹಾಗೂ ಕಲಾ ವಿಭಾಗಕ್ಕೆ 16 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿದ್ದು, ಅತಿಥಿ ಉಪನ್ಯಾಸಕರಿಗೆ ಅದರಲ್ಲಿ ಅರ್ಧದಷ್ಟು ಅಂದರೆ, ಕಲಾ ವಿಭಾಗದಲ್ಲಿ ವಾರಕ್ಕೆ 08 ಗಂಟೆಗಳು ಹಾಗೂ ವಿಜ್ಞಾನ ವಿಭಾಗಕ್ಕೆ ವಾರಕ್ಕೆ 10 ಗಂಟೆಗಳ ಕಾರ್ಯಭಾರವನ್ನು ಹಾಗೂ ಯು.ಜಿ.ಸಿ. ನಿಗಧಿಪಡಿಸಿರುವ ವಿದ್ಯಾರ್ಹತೆ ಹೊಂದಿರುವ ಅತಿಥಿ ಉಪನ್ಯಾಸಕರಿಗೆ ಮಾಹೆಯಾನ ರೂ. 13,000/- ಹಾಗೂ ಯು.ಜಿ.ಸಿ. ನಿಗಧಿಪಡಿಸಿರುವ ವಿದ್ಯಾರ್ಹತೆ ಹೊಂದಿಲ್ಲದೇ ಇರುವವರಿಗೆ ಮಾಹೆಯಾನ ರೂ. 11,000/-ಗಳ ಗೌರವಧನವನ್ನು ನಿಗಧಿಪಡಿಸಲಾಗಿತ್ತು.

ದಿನಾಂಕ: 18.12.2003ರ ಸರ್ಕಾರದ ಸುತ್ತೋಲೆಯನ್ವಯ ಅತಿಥಿ ಉಪನ್ಯಾಸಕರನ್ನು ತಾತ್ಕಾಲಿಕವಾಗಿ ಆಯಾ ಶೈಕ್ಷಣಿಕ ವರ್ಷಕ್ಕೆ ಮಾತ್ರ ಸೀಮಿತಗೊಳಿಸಿ ನೇಮಕ ಮಾಡಿಕೊಳ್ಳಲು ಅವಕಾಶವಿದ್ದು, ಅದರಂತೆ ಆಯಾ ಶೈಕ್ಷಣಿಕ ವರ್ಷದ ಕೊನೆಯ ದಿನಾಂಕದಂದು ಅತಿಥಿ ಉಪನ್ಯಾಸಕರನ್ನು ಅವರ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುತ್ತಿತ್ತು.

2020-21ನೇ ಶೈಕ್ಷಣಿಕ ಸಾಲಿನಲ್ಲಿ ವಿವಿಧ ವಿಷಯಗಳ ಒಟ್ಟು 12940 ಅತಿಥಿ ಉಪನ್ಯಾಸಕರುಗಳು ಕಲಾ ವಿಭಾಗದಲ್ಲಿ ವಾರಕ್ಕೆ 08 ಗಂಟೆಗಳು ಹಾಗೂ ವಿಜ್ಞಾನ ವಿಭಾಗಕ್ಕೆ ವಾರಕ್ಕೆ 10 ಗಂಟೆಗಳ ಕಾರ್ಯಭಾರಕ್ಕೆ ಕರ್ತವ್ಯನಿರ್ವಹಿಸಿರುತ್ತಾರೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರುಗಳು ಸೇವಾ ಸಕ್ರಮಾತಿ, ಗೌರವಧನ ಹೆಚ್ಚಳ ಮತ್ತಿತರೆ ಬೇಡಿಕೆಗಳನ್ನು ಈಡೇರಿಸುವಂತೆ ಕೋರಿ, ದಿನಾಂಕ: 10.12.2021 ರಿಂದ ಮಾಡಿದ ಮುಷ್ಕರದ ಹಿನ್ನಲೆಯಲ್ಲಿ ಅತಿಥಿ ಉಪನ್ಯಾಸಕರುಗಳ ಗೌರವಧನ ಹೆಚ್ಚಳ ಹಾಗು ಇತರೆ ಬೇಡಿಕೆಗಳಿಗೆ ಸಂಬಂಧಿಸಿದಂತೆ, ವಿವರವಾದ ಅಧ್ಯಯನ ನಡೆಸಿ, ವಿಸ್ತೃತ ವರದಿಯನ್ನು ಸಲ್ಲಿಸಲು ಸರ್ಕಾರವು ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿತ್ತು.

ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯು ಅತಿಥಿ ಉಪನ್ಯಾಸಕರ ವಿವಿಧ ಬೇಡಿಕೆಗಳನ್ನು ಕಾನೂನಾತ್ಮಕವಾಗಿ, ಆಡಳಿತಾತ್ಮಕವಾಗಿ ಮತ್ತು ಆರ್ಥಿಕ ಪರಿಸ್ಥಿತಿಗೆ ಅನುಗುಣವಾಗಿ ಪರಿಶೀಲಿಸಿ, ಸರ್ಕಾರಕ್ಕೆ ನೀಡಿದ ವರದಿಯನ್ನು ಪರಿಶೀಲಿಸಿ, ಸರ್ಕಾರವು ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ರಲ್ಲಿ ಮತ್ತು ತಿದ್ದುಪಡಿ ಆದೇಶ ದಿನಾಂಕ:24.01.2022ರಲ್ಲಿ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ಕಲಾ, ವಾಣಿಜ್ಯ ವಿಭಾಗಕ್ಕೆ ಗರಿಷ್ಠ 8 ಮತ್ತು ವಿಜ್ಞಾನ ವಿಭಾಗಕ್ಕೆ ಗರಿಷ್ಠ 10 ಗಂಟೆಗಳ ಕಾರ್ಯಭಾರಕ್ಕೆ ಬದಲಾಗಿ, ಗರಿಷ್ಠ ಕಲಾ, ವಾಣಿಜ್ಯ ವಿಭಾಗಕ್ಕೆ 15 ಮತ್ತು ವಿಜ್ಞಾನ

ವಿಭಾಗಕ್ಕೆ ಗರಿಷ್ಠ 19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಈ ಕೆಳಕಂಡಂತೆ ಹೆಚ್ಚಿಸಲಾಗಿದೆ.

ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)

ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ)

ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)

(ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ)

2021-22ನೇ ಶೈಕ್ಷಣಿಕ ಸಾಲಿನಲ್ಲಿ ಗರಿಷ್ಠ ಕಲಾ ಮತ್ತು ವಾಣಿಜ್ಯ ವಿಭಾಗಕ್ಕೆ 15 ಮತ್ತು ವಿಜ್ಞಾನ ವಿಭಾಗಕ್ಕೆ 19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಉಳಿಕೆ ಕಾರ್ಯಭಾರದ ಆಧಾರದ ಮೇಲೆ ಲಭ್ಯವಾಗಿರುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಕೇಂದ್ರಿಕೃತ ಆನ್‌ಲೈನ್ ಮೂಲಕ ರಾಜ್ಯವ್ಯಾಪಿ ಮೆರಿಟ್ / ಆಯ್ಕೆಪಟ್ಟಿ ಸಿದ್ಧಪಡಿಸಿ ನೇಮಿಸಿಕೊಳ್ಳಲಾಗಿದೆ.

ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವ ಹೊಂದಿರುವವರಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗಿದೆ. ರಾಜ್ಯವ್ಯಾಪಿ ಮೆರಿಟ್ / ಆಯ್ಕೆಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ ಇದುವರೆವಗೂ 8 ಸುತ್ತಿನ ಆನ್‌ಲೈನ್ ಕೌನ್ಸಲಿಂಗ್ ನಡೆಸಲಾಗಿದ್ದು, ಅಭ್ಯರ್ಥಿಗಳು ತಮಗೆ ಬೇಕಾಗಿರುವ ಸ್ಥಳ/ ಕಾಲೇಜನ್ನು ಆಯ್ಕೆ ಮಾಡಿಕೊಳ್ಳಲು ಮುಕ್ತ ಅವಕಾಶ ನೀಡಲಾಗಿದೆ. ಆನ್‌ಲೈನ್ ಕೌನ್ಸಲಿಂಗ್ ಮೂಲಕ ಸ್ಥಳ/ ಕಾಲೇಜು ಆಯ್ಕೆ ಮಾಡಿಕೊಂಡಿರುವ 9463 ಅತಿಥಿ ಉಪನ್ಯಾಸಕರು ಸಂಬಂಧಪಟ್ಟ ಕಾಲೇಜುಗಳಲ್ಲಿ ಕರ್ತವ್ಯಕ್ಕೆ ಹಾಜರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಕೋವಿಡ್-19 ಹಿನ್ನಲೆಯಲ್ಲಿ ಆಯಾ ವಿಶ್ವವಿದ್ಯಾಲಯಗಳ ಶೈಕ್ಷಣಿಕ ವೇಳಾ ಪಟ್ಟಿಗಳಲ್ಲಿ ವ್ಯತ್ಯಾಸಗಳಿದ್ದು, ಅದರನ್ವಯ 2021-22ನೇ ಶೈಕ್ಷಣಿಕ ಸಾಲು 2021ರ ಅಕ್ಟೋಬರ್ / ನವೆಂಬರ್ ನಿಂದ ಪ್ರಾರಂಭವಾಗಿ 2022ರ ಆಗಸ್ಟ್ / ಸೆಪ್ಟೆಂಬರ್ ವರೆಗೆ ಜಾರಿಯಲ್ಲಿದೆ. ಹಾಗೆಯೇ 2022-23ನೇ ಶೈಕ್ಷಣಿಕ ಸಾಲು ಸೆಪ್ಟೆಂಬರ್ ನಿಂದ ಪ್ರಾರಂಭವಾಗುತ್ತದೆ. ಈ ಹಿನ್ನಲೆಯಲ್ಲಿ 2021-22ನೇ ಶೈಕ್ಷಣಿಕ ಸಾಲಿನಲ್ಲಿ ನೇಮಕ ಮಾಡಿಕೊಳ್ಳಲಾಗಿರುವ ಎಲ್ಲಾ ಅತಿಥಿ ಉಪನ್ಯಾಸಕರ ಸೇವೆಯನ್ನು ಸದರಿ ಶೈಕ್ಷಣಿಕ ಸಾಲಿನ ಅಂತ್ಯದವರೆಗೆ ಬಳಸಿಕೊಳ್ಳಲಾಗುತ್ತಿದ್ದು, 2021-22ನೇ ಶೈಕ್ಷಣಿಕ ಸಾಲಿಗೆ ನೇಮಕಗೊಂಡಿರುವ ಅತಿಥಿ ಉಪನ್ಯಾಸಕರನ್ನು ಪ್ರಸ್ತುತ ಕರ್ತವ್ಯದಿಂದ ಬಿಡುಗಡೆಗೊಳಿಸಿರುವುದಿಲ್ಲ. ಅಲ್ಲದೇ 2022-23ನೇ ಶೈಕ್ಷಣಿಕ ಸಾಲು ಸೆಪ್ಟೆಂಬರ್ ನಿಂದ ಪ್ರಾರಂಭವಾಗಲಿದ್ದು, ಈ ಶೈಕ್ಷಣಿಕ ಅವಧಿಗೆ ಲಭ್ಯವಾಗುವ ಕಾರ್ಯಭಾರಕ್ಕನುಗುಣವಾಗಿ ಮಾತ್ರ ಅತಿಥಿ ಉಪನ್ಯಾಸಕರನ್ನು ಆಯ್ಕೆಮಾಡಿಕೊಳ್ಳಲು ಕ್ರಮವಹಿಸಲಾಗುತ್ತಿದೆ.

**ಇಡಿ 223 ಡಿಸಿಇ 2022**

**(ಡಾ. ಅಶ್ವತ್ಥ್ ನಾರಾಯಣ ಸಿ.ಎನ್.)**
**ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**